ಒಂದನೇ ಅಪರ ಸಿವಿಲ್ ಜಡ್ಜ್ ಮತ್ತು ಜೆಎಂಎಫ್ ಸಿ ರವರ ನ್ಯಾಯಾಲಯ, ಕನಕಪುರ

**ಸಿ.ಸಿ. 843/2024**

ಪಿರ್ಯಾದುದಾರರು ಃ ಕೋಡಿಹಳ್ಳಿ ಪೊಲೀಸ್ ಠಾಣೆ

– ವಿರುದ್ಧ –

ಆರೋಪಿತರಾದ ಃ ಗಿರೀಶ ಹೆಚ್. ಎಂ ಬಿನ್ ಲೇಟ್ ಮುನಿರಯ್ಯ
30 ವರ್ಷಗಳು, ಹೇರಿಂದ್ಯಾಪನಹಳ್ಳಿ ಗ್ರಾಮ
ಕೋಡಿಹಳ್ಳಿ ಹೋಬಳಿ, ಕನಕಪುರ ತಾಲ್ಲೂಕು.

:: **ದೋಷಾರೋಪಣೆ** ::

**ಶ್ರೀಮತಿ. ಲತಾಶ್ರೀ ಬಿ.ವಿ., ಬಿ.ಎ.ಎಲ್.,ಎಲ್.ಬಿ ಒಂದನೇ ಅಪರ ನ್ಯಾಯಿಕ ದಂಡಾಧಿಕಾರಿಗಳು, ಕನಕಪುರ, ಆದ ನಾನು ನಿಮ್ಮ ಮೇಲೆ ದೋಷಾರೋಪಣೆ ಏನೆಂದರೆಃ-**

ದಿನಾಂಕ:07.07.2024 ರಂದು ಬೆಳಿಗೆ, 08.00 ಗಂಟೆ ಸಮಯದಲ್ಲಿ ಮಾನ್ಯ ಘನ ನ್ಯಾಯಾಲಯದ ವ್ಯಾಪ್ತಿಗೆ ಒಳಪಡುವ ಕೋಡಿಹಳ್ಳಿ ಪೊಲೀಸ್ ಠಾಣಾ ಸರಹದ್ದು, ಕೋಡಿಹಳ್ಳಿ, ಹೋಬಳಿ, ಹೇರಿಂದ್ರಾಪನಹಳ್ಳಿ ಗ್ರಾಮದಲ್ಲಿ ವಾಸಿಗಳಾದ ಚಾಸಾ-1 ರಘು ರವರ ಬಾಬ್ತು ಮನೆಯ ಮುಂದೆ ಯರೇಹಳ್ಳಿ ಸರ್ವೆ ನಂ:03 ರಲ್ಲಿ 3/13 ಗುಂಟೆ ಜಮೀನಿನ ವಿಚಾರವಾಗಿ ಆರೋಪಿಯಾದ ನೀವು ಚಾಸಾ-02 ಜಯಮ್ಮ ಮತ್ತು ಚಾಸಾ-03 ಶೇಖರ್ ರವರಿಗೆ ಯರೇಹಳ್ಳಿ, ಸರ್ವೆ ನಂ:03 ರಲ್ಲಿ 3/13 ಗುಂಟೆ ಜಮೀನು ನಮ್ಮ ಪಿತ್ರಾರ್ಜಿತ ಆಸ್ತಿಯಾಗಿದ್ದು, ಜಮೀನು ನಮಗೆ ಸೇರಬೇಕೆಂದು ಹಾಗೂ ಜಮೀನಿನ ಪತ್ರ ನೀಡುವಂತೆ ಅವಾಚ್ಯ ಶಬ್ದದಿಂದ ನಿಂದಿಸಿ, ಕೈಗಳಿಂದ ಹೊಡೆದು, ಕಾಲಿನಿಂದ ತುಳಿದು, ಕೊಲೆ ಬೆದರಿಕೆ ಹಾಕಿದ್ದಲ್ಲದೇ ಚಾಸಾ-02 ರವರ ಮೈ ಕೈ ಗಳಿಗೆ ಹೊಡೆದು ಸಾಮಾನ್ಯ ಸ್ವರೂಪದ ಗಾಯಪಡಿಸಿದ್ದು, ಸದರಿ ನಿಮ್ಮ ಕೃತ್ಯವು ಭಾರತೀಯ ನ್ಯಾಯ ಸಂಹಿತೆ ಕಲಂ 115(2), 352, 351(2) ಅಡಿ ಶಿಕ್ಷಾರ್ಹ ಅಪರಾಧ ಮಾಡಿರುವಿರಿ.

ಸದರಿ ಅಪರಾಧಗಳು ಈ ನ್ಯಾಯಾಲಯದ ಸಂಜ್ಞೆಯಲ್ಲಿ ಬರುತ್ತವೆ ಮತ್ತು ಸದರೀ ವಿಚಾರಣೆಯು ನನ್ನ ಸಮಕ್ಷಮ ನಡೆಯಬೇಕೆಂದು ಈ ಮೂಲಕ ನಿರ್ದೇಶಿಸುತ್ತೇನೆ.

(ಈ ಆರೋಪಣೆಯನ್ನು ಈ ದಿನ ದಿನಾಂಕಃ30-10-2025 ರಂದು ಆರೋಪಿತರಿಗೆ ಕನ್ನಡ ಭಾಷೆಯಲ್ಲಿ ಓದಿ ಹೇಳಿ ಅವರ ಉತ್ತರಗಳನ್ನು ಯಥಾವತ್ತಾಗಿ ದಾಖಲಿಸಿದೆ)

ಓ. ಹೇ. ಕೇ. ಸರಿ ಇದೆ.

ಒಂದನೇ ಅಪರ ಸಿವಿಲ್ ನ್ಯಾಯಾಧೀಶರು
ಮತ್ತು ಜೆಎಂಎಫ್ ಸಿ ಕನಕಪುರ

CC 843/2024

**<u>ಆರೋಪಿಯ ಹೇಳಿಕೆ</u>**

ಪ್ರಶ್ನೆ-1 ಇದೀಗ ಓದಿ ಹೇಳಿದ ದೋಷಾರೋಪಣೆ ನಿಮಗೆ ಅರ್ಥವಾಯಿತೇ?

ಉತ್ತರಃ-

ಪ್ರಶ್ನೆ-2 ನೀವು ನಿಮ್ಮ ತಪ್ಪನ್ನು ಒಪ್ಪಿಕೊಳ್ಳುವಿರಾ ಅಥವಾ ವಿಚಾರಣೆಯಾಗಬಯಸುವಿರಾ?

ಉತ್ತರಃ-

(ದಿನಾಂಕಃ 30-10-2025 ರಂದು ತೆರೆದ ನ್ಯಾಯಾಲಯದಲ್ಲಿ ಆರೋಪಿಗೆ ತಿಳಿಯುವ ಭಾಷೆಯಲ್ಲಿ ಆರೋಪವನ್ನು ಓದಿ, ತಿಳಿಸಿ ಹೇಳಿ, ಕೇಳಿ ಉತ್ತರವನ್ನು ಪಡೆಯಲಾಗಿದೆ ಎಂದು ಈ ಮೂಲಕ ದೃಢೀಕರಿಸಿದೆ.)

**ಮೊದಲನೇ ಅಪರ ಸಿಜೆ ಮತ್ತು ಜೆಎಂಎಫ್‌ಸಿ**
**ನ್ಯಾಯಾಲಯ, ಕನಕಪುರ**

**<u>ಆರೋಪಿಯ ಸಹಿ :</u>**